# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ರಾಜರಾಜೇಶ್ವರಿ ನಗರ ವಲಯ ವ್ಯಾಪ್ತಿಯ, ರಾಜರಾಜೇಶ್ವರಿ ನಗರ ಉಪ ವಿಭಾಗದ ವಾರ್ಡ್– ಸಂಖ್ಯೆ–49 ರಾಜರಾಜೇಶ್ವರಿ ನಗರ (ಹಳೆ ವಾರ್ಡ್ ಸಂಖ್ಯೆ 160) ರಲ್ಲಿ ದಿನಾಂಕ: 20.08.2022 ರಂದು, ನಡೆದ ವಾರ್ಡ್ ಸಮಿತಿ ಸಭೆಯ ಸಭಾ ನಡವಳಿಗಳು

ಆಗಸ್ಟ್–2022 ಮಾಹೆಯ ಮೂರನೇ ಶನಿವಾರದ **ವಾರ್ಡ್** ಸಮಿತಿ ಸಭೆಯನ್ನು ದಿನಾಂಕ: 20.08.2022 ರಂದು ನಡೆಸಲಾಯಿತು. ಸದರಿ ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು

**ಸದರಿ ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.**

- BAF (Bangalore Apartment Federation) ಸದಸ್ಯರಾದ ಶ್ರೀ ಚಂದ್ರಶೇಖರ್ ರವರು ಈ ಕೆಳಕಂಡ ದೂರು/ಅಹವಾಲುಗಳನ್ನು ಸಲ್ಲಿಸಿದರು.
  - ಕಟ್ಟಡಗಳಿಗೆ ವಿದ್ಯುತ್, ಒಳಚರಂಡಿ ಹಾಗೂ ನೀರಿನ ಸಂಪರ್ಕಕ್ಕಾಗಿ ರಸ್ತೆ ಅಗೆದ ನಂತರ ಸದರಿ ಕಟ್ಟಡಗಳ ಮಾಲೀಕರು ಮರುಪೂರಣಗೊಳಿಸದೇ (Restoration) ಇರುವುದರಿಂದ ದ್ವಿಚಕ್ರ ವಾಹನ ಸವಾರರು ಬೀಳುವ ಸಂಭವವಿದ್ದು ಅಗತ್ಯ ಕ್ರಮ ವಹಿಸುವಂತೆ ಕೋರಿದರು.
  - ಮುಳ್ಳಕಟ್ಟಮ್ಮ ದೇವಸ್ಥಾನದ ಬಳಿ ಬ್ಲಾಕ್ ಸ್ಪಾಟ್ ಉಂಟಾಗುತ್ತಿದ್ದು ಪರಿಶೀಲಿಸಿ ಮಾರ್ಷಲ್ ಗಳನ್ನು ನಿಯೋಜಿಸುವಂತೆ ಅಥವಾ ಸಿಸಿಟಿವಿ ಕ್ಯಾಮೆರಾ ಅಳವಡಿಸಿ ಕಸ ಹಾಗದಂತೆ ಕ್ರಮ ವಹಿಸಲು ಕೋರಿದರು.
  - ವಾಣಿಜ್ಯ ಮಳಿಗೆಗಳಲ್ಲಿ ಹಾಗೂ ತರಕಾರಿ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಕವರ್ ಉಪಯೋಗಿಸುತ್ತಿದ್ದು ಸೂಕ್ತ ಕ್ರಮ ವಹಿಸಿ ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಹಾಕುವಂತೆ ಕೋರಿದರು.

* ರಾಜರಾಜೇಶ್ವರಿ ನಗರ ಉಪವಿಭಾಗ ವ್ಯಾಪ್ತಿಯಲ್ಲಿ ಹಿಂದೆ ಇದ್ದ 2 ವಾರ್ಡ್ ಗಳನ್ನು 4 ವಾರ್ಡ್‌ಗಳಾಗಿ ವಿಭಜಿಸಿರುವುದರಿಂದ ಎಲಾ ವಾರ್ಡ್ ಗಳಲ್ಲಿ ವಾರ್ಡ್ ಸಮಿತಿ ಸಭೆ ನಡೆಸಲು ಅಗತ್ಯ ಸಿಬ್ಬಂದಿ ಇಲ್ಲದೇ ಇರುವುದರಿಂದ ವಾರ್ಡ್ ಸಮಿತಿ ಸಭೆಯನ್ನು ಪರಿಣಾಮಕಾರಿಯಾಗಿ ನಡೆಸುವುದು ಅಸಾಧ್ಯವಾಗಿದ್ದು, ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಪರಿಣಾಮಕಾರಿಯಾಗಿ ವಾರ್ಡ್ ಸಮಿತಿ ಸಭೆಯನ್ನು ನಡೆಸುವಂತೆ ಸಾರ್ವಜನಿಕರು ಕೋರಿದರು.

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| | ಸಹಿ/- |
| ಕಾರ್ಯದರ್ಶಿಗಳು ವಾರ್ಡ್ ಸಮಿತಿ | ನೋಡಲ್ ಅಧಿಕಾರಿಗಳು |
| ವಾರ್ಡ್ ಸಂಖ್ಯೆ-160 | ವಾರ್ಡ್ ಸಂಖ್ಯೆ-160 |

__ಪ್ರತಿಯನ್ನು:-__

1. ಮಾನ್ಯ ವಲಯ ಆಯುಕ್ತರು ರಾರಾನಗರ ವಲಯ ರವರ ಮಾಹಿತಿಗಾಗಿ.
2. ಮಾನ್ಯ ಜಂಟಿ ಆಯುಕ್ತರು
3. ರಾರಾನಗರ ವಲಯ ರವರ ಮಾಹಿತಿಗಾಗಿ.
4. ಮುಖ್ಯ ಅಭಿಯಂತರರು ರಾರಾನಗರ ವಲಯರವರ ಮಾಹಿತಿಗಾಗಿ.
5. ಕಾರ್ಯಪಾಲಕ ಅಭಿಯಂತರರು ರಾರಾನಗರ ವಿಭಾಗ ರವರ ಮಾಹಿತಿಗಾಗಿ.
6. ಸಭೆಯಲ್ಲಿ ಹಾಜರಿದ್ದ ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
7. ವಾರ್ಡ್ ಸಮಿತಿ ಸದಸ್ಯರುಗಳಿಗೆ.
8. ಕಛೇರಿ ಪ್ರತಿ.